# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತನಾಲ್ಕನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ:15ನೇ ಸೆಪ್ಟೆಂಬರ್, 2021**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

### 02. ವರದಿಯನ್ನೊಪ್ಪಿಸುವುದು

**ಶ್ರೀಮತಿ ಭಾರತಿ ಶೆಟ್ಟಿ (ಸದಸ್ಯರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ )** ಅವರು 2020–21ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮ್ಕಕಳ ಕಲ್ಯಾಣ ಸಮಿತಿಯ 37ನೇ ವರದಿಯನ್ನೊಪ್ಪಿಸುವುದು.

### 03. ಅರ್ಜಿಗಳನ್ನೊಪ್ಪಿಸುವುದು

**ಶ್ರೀ ಎಂ.ಎ. ಗೋಪಾಲಸ್ವಾಮಿ** ಅವರು ಈ ಕೆಳಕಂಡ ಅರ್ಜಿಗಳನ್ನು ಒಪ್ಪಿಸುವುದು:–

ಅ)ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿಯಮಿತ, ಸಹಕಾರ ಭವನ, ಚಾಮರಾಜ ಜೋಡಿ ರಸ್ತೆ, ಮೈಸೂರು ಇಲ್ಲಿನ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಕಾನೂನುಗಳನ್ನು ಉಲ್ಲಂಘಿಸುತ್ತಿರುವ ಕುರಿತು.

ಆ) ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕಿನ ಜಂಬೂರು ಪ್ರಾಥಮಿಕ ಸಹಕಾರ ಸಂಘಕ್ಕೆ ಹಾಸನ ಜಿಲ್ಲಾ ಕೇಂದ್ರ ಬ್ಯಾಂಕ್ ನಿಯಮಿತದ ಸದಸ್ಯತ್ವವನ್ನು ನೀಡದೆ ಇರುವ ಕುರಿತು.

### 04. ಚುನಾವಣಾ ಪ್ರಸ್ತಾವಗಳು

ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಮಾನ್ಯ ಸಭಾನಾಯಕರು ಹಾಗೂ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು:–

**2021–22ನೇ ಸಾಲಿನ ವಿಧಾನ ಮಂಡಲದ/ವಿಧಾನ ಪರಿಷತ್ತಿನ ಈ ಕೆಳಕಂಡ ಸ್ಥಾಯಿ ಸಮಿತಿಗಳಿಗೆ ಹಾಗೂ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ ಸದಸ್ಯರುಗಳನ್ನು ಚುನಾಯಿಸುವ ಕುರಿತು.**

..2..

ಅ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 259(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸರ್ಕಾರಿ ಭರವಸೆಗಳ ಸಮಿತಿಗೆ ಒಂಭತ್ತು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಆ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 250(1)ನೇ ನಿಯಮದ ಅನುಸಾರವಾಗಿ ಈ ಸಭೆ **ಹಕ್ಕುಬಾಧ್ಯತಾ ಸಮಿತಿಗೆ ಏಳು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಇ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 349(2)ನೇ ನಿಯಮದ ಅನುಸಾರವಾಗಿ ಈ ಸಭೆ **ವಸತಿ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಈ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 261(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸದಸ್ಯರುಗಳ ಖಾಸಗಿ ವಿಧೇಯಕಗಳು ಮತ್ತು ನಿರ್ಣಯಗಳ ಸಮಿತಿಗೆ ಎಂಟು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಉ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 245(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಊ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 248ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಉದ್ಯಮಗಳ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಋ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 254(1)ನೇ ನಿಯಮದ ಅನುಸಾರವಾಗಿ ಈ ಸಭೆ **ಅಧೀನ ಶಾಸನ ರಚನಾ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಎ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 264ನೇ ನಿಯಮದ ಅನುಸಾರವಾಗಿ ಈ ಸಭೆ **ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಏ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 267ನೇ ನಿಯಮದ ಅನುಸಾರವಾಗಿ ಈ ಸಭೆ **ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಐ) ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ ಅಧಿನಿಯಮ 1994 ಕಲಂ 21(1)ರ ರೀತ್ಯಾ ವಿಧಾನ ಪರಿಷತ್ತಿನ ಇಬ್ಬರು ಸದಸ್ಯರುಗಳನ್ನು ಚುನಾಯಿಸಬೇಕೆಂದು ಸೂಚಿಸುವುದು.

## 05. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಚರ್ಚೆ

**ಶ್ರೀ ಎಸ್.ಆರ್. ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು,** ಇವರು ಕೃಷ್ಣ ಮೇಲ್ದಂಡೆ ಯೋಜನೆಯ 3ನೇ ಹಂತದ ಕಾಮಗಾರಿ ವಿಳಂಬವಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

## 06. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಶಶೀಲ್ ಜಿ. ನಮೋಶಿ, ಕೆ.ಟಿ. ಶ್ರೀಕಂಠೇಗೌಡ ಡಾ. ವೈ.ಎ. ನಾರಾಯಣಸ್ವಾಮಿ, ಅರುಣ ಶಹಾಪುರ** ಹಾಗೂ ಇತರರು ವೃತ್ತಿ ಶಿಕ್ಷಣ ಇಲಾಖೆಯಲ್ಲಿ ಸೇವೆ ಸಲ್ಲಿಸಿ ವಿವಿಧ ಇಲಾಖೆಗಳಲ್ಲಿ ವಿಲೀನಗೊಂಡಿರುವ ಶಿಕ್ಷಕರು/ಸಿಬ್ಬಂದಿಗಳಿಗೆ ನಿಶ್ಚಿತ ಪಿಂಚಣಿ ಸೌಲಭ್ಯ ಒದಗಿಸಲು ವಿಧೇಯಕಕ್ಕೆ ತಿದ್ದುಪಡಿ ತರಲು ಹಾಗೂ ವಿಲೀನಗೊಳಪಟ್ಟು ಆದೇಶವಾಗದಿರುವ 28 ಬೋಧಕೇತರ ಸಿಬ್ಬಂದಿ ಮತ್ತು 11 ಜನ ಉಪನ್ಯಾಸಕರಿಗೆ ವಿಲೀನಾತಿ ಆದೇಶ ಹೊರಡಿಸುವುದರ ಜೊತೆಗೆ ಪದವಿ ಪೂರ್ವ ಕಾಲೇಜುಗಳಲ್ಲಿ ವಿಲೀನಗೊಂಡ 90 ಉಪನ್ಯಾಸಕರಿಗೆ ಬಿ.ಎಡ್. ವಿನಾಯಿತಿ ನೀಡಿ ಖಾಯಂ ಪೂರ್ವ ಅವಧಿ ಘೋಷಣೆ ಮಾಡಿ ಸರ್ಕಾರಿ ಸೌಲಭ್ಯ ಒದಗಿಸುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಗಮನ ಸೆಳೆಯುವುದು.

೦2. **ಶ್ರೀ ಕೆ.ಸಿ. ಕೊಂಡಯ್ಯ** ಅವರು ಬಳ್ಳಾರಿ ಮಹಾನಗರ ಪಾಲಿಕೆಯ ಮೇಯರ್ ಮತ್ತು ಉಪ ಮೇಯರ್, ಅಧ್ಯಕ್ಷರ/ಉಪಾಧ್ಯಕ್ಷರ ಚುನಾವಣೆ ನಡೆಸುವ ಕುರಿತು ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

೦1. **ಶ್ರೀ ಎಂ. ನಾರಾಯಣಸ್ವಾಮಿ, ವಿರೋಧ ಪಕ್ಷದ ಮುಖ್ಯ ಸಚೇತಕರು,** ಅವರು ಡಾ.ಕೆ.ಶಿವರಾಮ್ ಕಾರಂತ್ ಬಡಾವಣೆ ನಿರ್ಮಾಣಕ್ಕಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಸ್ವಾಧೀನಪಡಿಸಿಕೊಳ್ಳಲಾಗಿರುವ 3546 ಎಕರೆ 12 ಗುಂಟೆ ಜಮೀನಿಗೆ ಭೂ ಸ್ವಾಧೀನ ಕಾಯ್ದೆಯಡಿ ರೈತರುಗಳು ಸಲ್ಲಿಸಿರುವ ಆಕ್ಷೇಪಣೆಗಳಿಗೆ ಉತ್ತರವನ್ನು ನೀಡದೆ ಐತೀರ್ಪು ಮಾಡಲು ಉದ್ದೇಶಿಸಿರುವುದರಿಂದ ರೈತರಿಗೆ ಅನ್ಯಾಯವಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

..4..

೦2. **ಶ್ರೀಯುತರುಗಳಾದ ಶಶೀಲ್ ಜಿ. ನಮೋಶಿ, ಮರಿತಿಬ್ಬೇಗೌಡ, ಕೆ.ಟಿ. ಶ್ರೀಕಂಠೇಗೌಡ, ಆಯನೂರು ಮಂಜುನಾಥ್, ಡಾ. ವೈ.ಎ. ನಾರಾಯಣಸ್ವಾಮಿ ಹಾಗೂ ಅ. ದೇವೇಗೌಡ** ಅವರುಗಳು ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ ಹಾಗೂ ಪ್ರೌಢಶಾಲೆಯಿಂದ ಪದವಿ ಪೂರ್ವ ಕಾಲೇಜಿಗೆ ಬಡ್ತಿ ಹೊಂದಿದ ಉಪನ್ಯಾಸಕರಿಗೆ 6ನೇ ವೇತನ ಆಯೋಗದ ಶಿಫಾರಸ್ಸಿನ ಅನ್ವಯ ಬಡ್ತಿ ಪಡೆಯದೆ ಇರುವ ಉಪನ್ಯಾಸಕರಿಗೆ 10, 15, 20, 25 ವರ್ಷಗಳ ಕಾಲಮಿತಿ ಬಡ್ತಿ ಮಂಜೂರು ಮಾಡದೆ ಇರುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಸುನೀಲ್ ಗೌಡ ಬಿ. ಪಾಟೀಲ್** ಅವರು ಗ್ರಾಮ ಪಂಚಾಯತ್ ಅಧ್ಯಕ್ಷರು/ ಉಪಾಧ್ಯಕ್ಷರು ಹಾಗೂ ಸದಸ್ಯರುಗಳ ಗೌರವ ಧನವು ಅತ್ಯಂತ ಕಡಿಮೆ ಇರುವುದರಿಂದ ಸದರಿಯವರುಗಳ ಗೌರವ ಧನವನ್ನು ಪರಿಷ್ಕರಿಸಿ ನಿಗಧಿಪಡಿಸುವುದರ ಜೊತೆಗೆ ಉಚಿತ ಬಸ್ ಪಾಸ್ ಹಾಗೂ ಪಿಂಚಣಿ ಸೌಲಭ್ಯವನ್ನು ನೀಡುವುದರ ಕುರಿತು ಪ್ರಸ್ತಾಪಿಸುವುದು

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**